# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಗಳಿಂದ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಗೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ಉದ್ದಿಮೆದಾರರಿಗೆ ಕೆನೆಪದರ ಆದಾಯ ಮಿತಿಯನ್ನು ತೆಗೆದುಹಾಕುವ ಕುರಿತು.

**ಓದಲಾಗಿದೆ :**
1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕನಿ/ಮಾಶಾ/ಸಿ.ಆರ್–03/2018–19, ದಿ:13.07.2018.
2. ನಿರ್ದೇಶಕರು (ತಾಂತ್ರಿಕ ಕೋಶ), ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಸಿಐ 113 ಎಸ್‌ಪಿಐ 2017, ಬೆಂಗಳೂರು ದಿನಾಂಕ:27.08.2018.

*********

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು ಹಿಂದುಳಿದ ವರ್ಗಗಳ ಇಲಾಖೆ ಇವರು, ಸನ್ಮಾನ್ಯ ಮುಖ್ಯಮಂತ್ರಿಗಳು 2018–19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ:199ರಲ್ಲಿ ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಗಳಿಂದ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಮತ್ತು ಪ್ರವರ್ಗ–2ಬಿ, ಗೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ಉದ್ದಿಮೆದಾರರಿಗೆ ಕೆನೆಪದರ ಆದಾಯ ಮಿತಿಯನ್ನು ತೆಗೆದುಹಾಕಲಾಗುವುದು ಎಂದು ಘೋಷಿಸಿರುವುದರಿಂದ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಿಐ 113 ಎಸ್‌ಪಿಐ 2017, ಬೆಂಗಳೂರು ದಿನಾಂಕ:28.12.2017ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ(ಕೆ.ಐ.ಎ.ಡಿ.ಬಿ)/ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕ ಅಭಿವೃದ್ಧಿ ನಿಗಮ(ಕೆ.ಎಸ್.ಎಸ್.ಐ.ಡಿ.ಸಿ) ಸಂಸ್ಥೆಗಳಿಂದ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಮತ್ತು ಪ್ರವರ್ಗ–2ಬಿ, ಗಳಿಗೆ ಮಂಜೂರು/ಹಂಚಿಕೆ ಮಾಡಲಾಗುವ ಪ್ಲಾಟ್/ಶೆಡ್‌ಗಳ ಒಟ್ಟು ಮೊತ್ತದಲ್ಲಿ ಶೇ.25ರಷ್ಟು ರಿಯಾಯಿತಿ ನೀಡಲು ಸರ್ಕಾರವು ತಾತ್ವಿಕ ಅನುಮೋದನೆ (In-principle approval) ನೀಡಲಾಗಿರುವುದರಿಂದ, 'ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಗಳಿಂದ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಮತ್ತು ಪ್ರವರ್ಗ–2ಬಿ, ಗೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ಉದ್ದಿಮೆದಾರರಿಗೆ ಉದ್ದಿಮೆಗಳನ್ನು ಸ್ಥಾಪಿಸಲು ಉತ್ತೇಜನ ನೀಡುವುದು ಅವಶ್ಯಕವಾಗಿದ್ದು', ಸದರಿ ಪ್ರವರ್ಗಗಳಿಗೆ ನಿಗಧಿಪಡಿಸಿರುವ ಕೆನೆಪದರ ಆದಾಯ ಮಿತಿಯನ್ನು ತೆಗೆದುಹಾಕುವ ಬಗ್ಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯೊಂದಿಗೆ ಸಮಾಲೋಚಿಸಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು "2018–19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ:199ರಲ್ಲಿ ಕೆ.ಐ.ಎ.ಡಿ.ಬಿ/ಕೆ.ಎಸ್.ಎಸ್.ಐ.ಡಿ.ಸಿ ಗಳಿಂದ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಮತ್ತು ಪ್ರವರ್ಗ–2ಬಿ, ಗೆ ಸೇರಿಧ ಸಣ್ಣ ಮತ್ತು ಅತಿ ಸಣ್ಣ ಉದ್ದಿಮೆದಾರರಿಗೆ ಕೆನೆಪದರ ಆದಾಯ ಮಿತಿಯನ್ನು ತೆಗೆದುಹಾಕಲಾಗುವುದು ಎಂದು ಘೋಷಣೆ ಮಾಡಲಾಗಿದ್ದು. ಸದರಿ ಘೋಷಣೆಗೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಹಮತಿ ಇರುತ್ತದೆ" ಎಂದು ತಿಳಿಸಿರುತ್ತದೆ.

ಪು.ತಿ.ನೋ...2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 215 ಬಿಸಿಎ 2018, ಬೆಂಗಳೂರು, ದಿ:24.09.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ(ಕೆ.ಐ.ಎ.ಡಿ.ಬಿ)/ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ)ಗಳಿಂದ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ನಿಗಧಿಪಡಿಸಿರುವ/ನಿಗಧಿಪಡಿಸಬಹುದಾದ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿನೊಂದಿಗೆ ಹಿಂದುಳಿದ ವರ್ಗಗಳ ಪ್ರವರ್ಗ-1, ಪ್ರವರ್ಗ-2ಎ, ಮತ್ತು ಪ್ರವರ್ಗ-2ಬಿ ಗೆ ಸೇರಿದ ಸಣ್ಣ ಮತ್ತು ಅತಿ ಸಣ್ಣ ಉದ್ದಿಮೆದಾರರಿಗೆ ಕೈಗಾರಿಕಾ ಶೆಡ್‌ಗಳು ಹಾಗೂ ಸಹಾಯಧನ ನೀಡುವ ಕಾರ್ಯಕ್ರಮಗಳಲ್ಲಿ ಕೆನೆಪದರ ಆದಾಯ ಮಿತಿಯನ್ನು ತೆಗೆದುಹಾಕಲಾಗಿದೆ.

ಈ ಆದೇಶವನ್ನು ವಾಣಿಜ್ಯ ಮತ್ತು ಕೈಗಾರಿಕ ಇಲಾಖೆ ಟಿಪ್ಪಣಿ ಸಂಖ್ಯೆ:CI 113 SPI 2017, ದಿ:27.08.2018, ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 602 ವೆಚ್ಚ-3/2018, ದಿ:15.09.2018 ಮತ್ತು ಯೋಜನೆ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 126 ಐಎಂಎಂ 2018, ದಿನಾಂಕ:17.09.2018ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಸ್.ಎನ್. ಕಲಾವತಿ

(ಎಸ್.ಎನ್. ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:</u>

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಯವರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ ಇವರಿಗೆ ಕಳುಹಿಸಲು ಕೋರಿದೆ.

<u>ಪ್ರತಿಗಳು:</u>

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾಂ, ಕಲಬುರಗಿ ವಿಭಾಗಗಳು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ-49, ಖನಿಜ ಭವನ, ಡಿ. ದೇವರಾಜ ಅರಸು ಅರಸ್ ರಸ್ತೆ, ಬೆಂಗಳೂರು-01.
7. ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

8. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-01
9. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕೆಐಎಡಿಬಿ, ಖನಿಜ ಭವನ, ಡಿ. ದೇವರಾಜ ಅರಸು ಅರಸ್ ರಸ್ತೆ, ಬೆಂಗಳೂರು-01.
11. ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು-10.
12. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
13. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು } ಆಯುಕ್ತರ ಮುಖೇನಾ
14. ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ),
15. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.
16. ಅಪರ ನಿರ್ದೇಶಕರು (ಕೈ.ಅ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ-49, ಖನಿಜ ಭವನ, ಡಿ. ದೇವರಾಜ ಅರಸು ರಸ್ತೆ, ಬೆಂಗಳೂರು-01.
17. ಜಂಟಿ ನಿರ್ದೇಶಕರು (ಎಇಪಿ/ಎಂಎಸ್‌ಎಂಇ/ಯೋಜನೆ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನಂ-49, ಖನಿಜ ಭವನ, ಡಿ. ದೇವರಾಜ ಅರಸು ರಸ್ತೆ, ಬೆಂಗಳೂರು-01.
18. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.
19. ಸರ್ಕಾರದ ಉಪ ಕಾರ್ಯದರ್ಶಿ, ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
20. ಸರ್ಕಾರದ ಅಧೀನ ಕಾರ್ಯದರ್ಶಿ-1ರವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
21. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.